**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ.43/2023**

ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಹೆಸರು | ಪಾಪಣ್ಣ | ಸಿ.ಡಬ್ಲ್ಯೂ:8 |
| ತಂದೆ/ಗಂಡನ ಹೆಸರು | ಸೂರಯ್ಯ | ಪಿ.ಡಬ್ಲ್ಯೂ:8 |
| ವಯಸ್ಸು | 48 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸಸ್ಥಳ | ಅಬ್ಬೇನಹಳ್ಳಿ | ದಿ:10-10-2025. |

**ಮುಖ್ಯ ವಿಚಾರಣೆ : ಮಾನ್ಯ ಎ.ಪಿ.ಪಿ. ರವರಿಂದ:**

ನನಗೆ ಚಾಸಾ-1 ಗೊತ್ತು. ಚಾಸಾ-4 ರಿಂದ 7 ನನಗೆ ಗೊತ್ತು. ನ್ಯಾಯಾಲಯದ ಮುಂದಿರುವ ಆರೋಪಿತರು ನನಗೆ ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ. ನಾನು ಯಾವುದೇ ಜಗಳವನ್ನು ಕಣ್ಣಾರೆ ನೋಡಿಲ್ಲ ಮತ್ತು ಬಿಡಿಸಿಲ್ಲ. ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದ:**

2. ದಿ:24-10-2022 ರಂದು ನಮ್ಮ ಗ್ರಾಮವಾದ ಕೊರಡಿಹಳ್ಳಿಯಲ್ಲಿಯಲ್ಲಿ ಚಾಸಾ-4 ರವರ ತಂದೆಯ ಅಂತ್ಯ ಕ್ರಿಯೇ ಮಾಡಿದ್ದೇವು ಎಂದರೆ ನನಗೆ ಗೊತ್ತಿಲ್ಲ. ಸದರಿ ಸಮಯದಲ್ಲಿ 1 ನೇ ಆರೋಪಿ ಜಮೀನು ವಿಚಾರದಲ್ಲಿ ಚಾಸಾ-1 ಮತ್ತು 4 ರವರೊಟ್ಟಿಗೆ ಗಲಾಟೆ ಮಾಡಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಸಮಯದಲ್ಲಿ ಅಲ್ಲಿಯೇ ಇದ್ದ ಸಣ್ಣಬೋರಣ್ಣ ಮತ್ತು ನಾನು ಜಗಳ ಬಿಡಿಸಿ ಬುದ್ಧಿವಾದ ಹೇಳಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

3. ದಿ:28-10-2022 ರಂದು ಬೆಳಿಗ್ಗೆ 6-00 ಗಂಟೆ ಸಮಯದಲ್ಲಿ ಚಾಸಾ-4 ರವರ ತಂದೆಯ ವೈಕುಂಠಸಮಾರಾಧನೆಯ ಪ್ರಯುಕ್ತ ಚಾಸಾ-1 ರವರು ಮನೆಯ ಹತ್ತಿರ ಇದ್ದಾಗ 1 ನೇ ಆರೋಪಿ ಅಲ್ಲಿಗೆ ಬಂದು ಚಾಸಾ-1 ರವರನ್ನು ಮುಂದಕ್ಕೆ ಹೋಗದಂತೆ ತಡೆಹಿಡಿದಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಸಮಯದಲ್ಲಿ ಚಾಸಾ-1 ರವರಿಗೆ 1 ನೇ ಆರೋಪಿ ಅವಾಚ್ಯವಾಗಿ ಬೈದಿರುತ್ತಾರೆ ಮತ್ತು ಚಾಸಾ-1 ರವರನ್ನು ಬಿಡುವುದಿಲ್ಲವೆಂದು ಬೆದರಿಕೆ ಹಾಕಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಆಗ ನಾನು, ಚಾಸಾ-4 ಮತ್ತು ಚಾಸಾ-6 ರವರು 1 ನೇ ಆರೋಪಿಯನ್ನು ಸಮಾಧನಪಡಿಸಿ ಕರೆದುಕೊಂಡು ಹೋಗಬೇಕಾದರೆ 1 ನೇ ಆರೋಪಿ ತನಗೆ 2 ನೇ ಆರೋಪಿಯಾದ ನಾಗೇಶನ ಬಲವಿದ್ದು ಅವನು ಜಮೀನು ವಿಚಾರವಾಗಿ ಗಲಾಟೆ ಮಾಡಲು

ಹೇಳಿಕೊಟ್ಟಿರುತ್ತಾನೆ ಎಂದು ನುಡಿದಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಗಲಾಟೆ 2 ನೇ ಆರೋಪಿಯ ಕುಮ್ಮಕ್ಕಿನಿಂದ ಆಗಿದೆ ಎಂದರೆ ನನಗೆ ಗೊತ್ತಿಲ್ಲ.

4. ದಿಃ04-11-2022 ರಂದು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿಃ6 ಎಂದು ಗುರುತಿಸಲಾಯಿತು. ಈ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋತರಿಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಶ್ರೀ ಓ ಪಿ., ಆರೋಪಿತರ ಪರ ವಕೀಲರಿಂದಃ**

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ.